ರಾಜ್ಯದಲ್ಲಿರುವ ಬಿಎಡ್ ಹಾಗೂ ಟಿಸಿಹೆಚ್ ನಿರುದ್ಯೋಗುಗಳ ಸಂಖ್ಯೆ.

782(940) ಶ್ರೀ ಸಿ. ಚನ್ನಿಗಪ್ಪ (ಕೊರಟಗೆರೆ) ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಬಿಎಡ್ ವಿದ್ಯಾವಂತ ನಿರುದ್ಯೋಗಿಗಳನ್ನು ವಯೋಮಿತಿಯ ಆಧಾರದ ಮೇಲೆ ಶೇಕಡ ಎಷ್ಟರಂತೆ ನೇಮಕ ಮಾಡಿರುವ ವಯೋಮಿತಿ ಬಿಎಡ್ ನಿರುದ್ಯೋಗಿಗಳ ಸಂಖ್ಯೆ ಎಷ್ಟು?

ಆ) ಶೇಕಾಡಾವಾರು ಕಡಿಮೆ ಅಂಕ ಪಡೆದಿರುವ ಟಿಸಿಹೆಚ್ ತರಬೇತಿ ಹೊಂದಿರುವ ನಿರುದ್ಯೋಗಿಗಳು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :—

ಅ) 55257

ವಯೋಮಿತಿ ಮೇಲೆ ನೇಮಕಾತಿ ಮಾಡಿರುವುದಿಲ್ಲ.

ಆ) ನೇಮಕಾತಿಯು ಅರ್ಹತೆ ಮೇಲೆ ಶೇಕಡಾವಾರು ಅಂಕಗಳನ್ನು ಪರಿಗಣಿಸುವುದರಿಂದ ಕಡಿಮೆ ಶೇಕಡಾವಾರು ಅಂಕ ಪಡೆದ ಅಭ್ಯರ್ಥಿಗಳ ಬಗ್ಗೆ ಯಾವುದೇ ಕ್ರಮ ಕೈಗೊಳ್ಳಲು ಬರುವುದಿಲ್ಲ.

ಟಿಸಿಹೆಚ್ ಫಲಿತಾಂಶ ಕುರಿತು.

783(1096) ಶ್ರೀ ಕೆ.ಎಸ್. ಈಶ್ವರಪ್ಪ (ಶಿವಮೊಗ್ಗ) :— ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನವೆಂಬರ್ 1998ರಲ್ಲಿ ಟಿ.ಸಿ.ಹೆಚ್. ಪರೀಕ್ಷೆ ಫಲಿತಾಂಶ ಇದುವರೆಗೆ ಪ್ರಕಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಫಲಿತಾಂಶ ಪ್ರಕಟಿಸಲು ತೆಗೆದುಕೊಂಡಿರುವ ಕ್ರಮವೇನು?

ಇ) ಟಿ.ಸಿ.ಹೆಚ್. ಪರೀಕ್ಷೆಗೆ ಹಾಜರಾಗಿದ್ದು ಫಲಿತಾಂಶ ಪ್ರಕಟವಾಗದೇ ಇರುವ ಅಭ್ಯರ್ಥಿಗಳಿಂದ ಕರೆಯಲಾಗಿರುವ ಶಿಕ್ಷಕರ ಹುದ್ದೆಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆಯೇ?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :—

ಅ) ನವೆಂಬರ್ 98ರಲ್ಲಿ ನಡೆದ ಪ್ರಥಮ ಮತ್ತು ದ್ವಿತೀಯ ಟಿಸಿಹೆಚ್ ಪರೀಕ್ಷೆಗಳ ಫಲಿತಾಂಶವನ್ನು ಈಗಾಗಲೇ ಪ್ರಕಟಿಸಲಾಗಿದೆ.

ಆ) ಉದ್ಭವಿಸುವುದಿಲ್ಲ.

ಇ) ಫಲಿತಾಂಶ ಪ್ರಕಟಿಸಲಾಗಿರುವುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಬೀದರ್ ಜಿಲ್ಲೆಯಲ್ಲಿ ಹೊಸದಾಗಿ ಪ್ರಾರಂಭಿಸಿದ ಆಸ್ಪತ್ರೆಗಳು.

784 (1189) ಶ್ರೀ ಗುರುಪಾದಪ್ಪ ಸಂಗನಬಸಪ್ಪ ನಾಗಮಾರಪಲ್ಲಿ (ಔರಾದ್) :— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ ನಾಲ್ಕು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಹೊಸದಾಗಿ ಪ್ರಾರಂಭಿಸಲಾದ ಆಸ್ಪತ್ರೆಗಳ ಸಂಖ್ಯೆ ಎಷ್ಟು?

ಆ) ಜಿಲ್ಲೆಯ ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯರುಗಳ ಸಂಖ್ಯೆ ಎಷ್ಟು?

ಇ) ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು? (ಯಾವ ಯಾವ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ ಇದೆಯೆಂಬುವ ಬಗ್ಗೆ ವಿವರ ತಿಳಿಸುವುದು).

ಈ) ಸರ್ಕಾರವು ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು?

ಉ) ಜಿಲ್ಲೆಯಲ್ಲಿ ಈ ಸಾಲಿನಲ್ಲಿ ಯಾವ ಸ್ಥಳಗಳಲ್ಲಿ ಹೊಸದಾಗಿ ಆಸ್ಪತ್ರೆಗಳನ್ನು ಪ್ರಾರಂಭಿಸಲಾಗುವುದು.

ಡಾ: ಹೆಚ್.ಸಿ. ಮಹಾದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ) ಕಳೆದ ನಾಲ್ಕು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಹೊಸದಾಗಿ 5 ಪ್ರಾ.ಆ.ಕೇಂದ್ರ, 2 ಪ್ರಸೂತಿ ಗೃಹಗಳನ್ನು ಪ್ರಾರಂಭಿಸಲಾಗಿದೆ.

ಆ) 118 ವೈದ್ಯರುಗಳು ಕಾರ್ಯನಿರ್ವಹಿಸುತ್ತಿದ್ದಾರೆ.